**ದಿನಾಂಕಃ 12.08.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ಆ ದಿನ ನಾನು ದ್ವಿಚಕ್ರ ವಾಹನದಲ್ಲಿ ನಾನು ಒಬ್ಬನೇ ಹೋಗುತ್ತಿದ್ದೆನು. ಅಪಘಾತವಾದ ನಂತರ ನನ್ನನ್ನು ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿರುತ್ತಾರೆ. ಆಪಾದಿತ ವಾಹನದ ಚಾಲಕ ಮತ್ತು ನನ್ನನ್ನು ಕರೆದುಕೊಂಡು ಹೋದ ಆಟೋದ ಚಾಲಕ ಆಸ್ಪತ್ರೆಗೆ ಬಂದಿದ್ದರು. ಅಪಘಾತ ಹೇಗೆ ಸಂಭವಿಸಿತು ಎಂದು ಆಸ್ಪತ್ರೆಯಲ್ಲಿ ಹೇಳಿರುತ್ತೇನೆ. ಆ ಸಂದರ್ಭದಲ್ಲಿ ಆಪಾದಿತ ವಾಹನದ ಸಂಖ್ಯೆಯನ್ನು ಹೇಳಿರುವುದಿಲ್ಲ. ಆ ಸಂದರ್ಭದಲ್ಲಿ ವಾಹನದ ಸಂಖ್ಯೆ ನನಗೆ ತಿಳಿದಿತ್ತಾ ಎಂದರೆ ಸಾಕ್ಷಿಯು ನನಗೆ ಪ್ರಜ್ಞೆ ಇರಲಿಲ್ಲ ಎಂದು ನುಡಿಯುತ್ತಾರೆ. ನನ್ನ ಮನೆಯವರು ಅಪಘಾತದ ವಿಚಾರ ತಿಳಿದು ಆಸ್ಪತ್ರೆಗೆ ಬಂದಿರುತ್ತಾರೆ. ಅಪಘಾತದ ಬಗ್ಗೆ ಅದೇ ದಿನ ಪೊಲೀಸರಿಗೆ ಮಾಹಿತಿ ನೀಡಿಲ್ಲ. ಅಪಘಾತವಾದ ದಿನಾಂಕಂದೇ ದೂರು ನೀಡಲು ತೊಂದರೆ ಇತ್ತಾ ಎಂದರೆ ಸಾಕ್ಷಿಯು ಆಪಾದಿತ ವಾಹನದ ಚಾಲಕ ಎಲ್ಲಾ ವೆಚ್ಚಗಳನ್ನು ನೋಡಿಕೊಳ್ಳುವುದಾಗಿ ಮತ್ತು ದೂರನ್ನು ನೀಡಿದಂತೆ ಹೇಳಿದ ಮೇರೆಗೆ ದೂರು ನೀಡಿಲ್ಲ ಎಂದು ನುಡಿಯುತ್ತಾರೆ. 3 ದಿನಗಳ ನಂತರ ದೂರು ನೀಡಲಾಗಿದೆ ಎಂದರೆ ಸರಿ. ದೂರಿನಲ್ಲಿ ಆಪಾದಿತ ವಾಹನದ ಚಾಲಕ ನೀಡಿದ ಭರವಸೆಯ ಬಗ್ಗೆ ಉಲ್ಲೇಖ ಇಲ್ಲ ಎಂದರೆ ಸರಿ. ನನಗೆ ಬೇರೆ ಯಾವುದೋ ಒಂದು ವಾಹನದಿಂದ ಅಪಘಾತವಾದ ಕಾರಣ ತಡವಾಗಿ ದೂರು ನೀಡಲಾಗಿದೆ ಎಂದರೆ ಸರಿಯಲ್ಲ. ಆಪಾದಿತ ವಾಹನದಿಂದ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ಆಪಾದಿತ ವಾಹನ ಅಪಘಾತದಲ್ಲಿ ಭಾಗಿಯಾಗಿಲ್ಲ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಆಪಾದಿತ ವಾಹನದ ವಿರುದ್ದ ಸುಳ್ಳು ದೂರು ನೀಡಲಾಗಿದೆ ಎಂದರೆ ಸರಿಯಲ್ಲ.

ನಾನು ಮೂರು ದಿನ ಆಸ್ಪತ್ರೆಯಲ್ಲಿ ದಾಖಲಾಗಿದ್ದೆನು. ನನ್ನ ಬಲಗಾಲಿನ ನರಕ್ಕೆ ಮತ್ತು ಹಲ್ಲಿಗೆ ಗಾಯಗಳು ಆಗಿದ್ದವು. ನನಗೆ ಶಸ್ತ್ರ ಚಿಕಿತ್ಸೆ ಮಾಡಿರುತ್ತಾರೆ. ನನಗೆ ಯಾವುದೇ ರಾಡನ್ನು ಜೋಡಣೆ ಮಾಡಿರುವುದಿಲ್ಲ. ಸಂಪೂರ್ಣ ಚಿಕಿತ್ಸೆಯನ್ನು ಮಣಿಪಾಲ್ ಆಸ್ಪತ್ರೆಯಲ್ಲಿ ಪಡೆದಿರುತ್ತೇನೆ. ಓಪಿಡಿ ದಾಖಲಾತಿ ಇದ್ದು, ಅದನ್ನು ಹಾಜರುಪಡಿಸಿರುತ್ತೇನೆ. ಅಪಘಾತದಲ್ಲಿ ಉಂಟಾದ ಗಾಯಗಳು ವಾಸಿಯಾಗಿದ್ದು, ನಾನು

ಮೊದಲಿನಂತೆ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ಚಿಕಿತ್ಸೆ ಮತ್ತು ಇತರೆ ಖರ್ಚುಗಳಿಗೆ ನಾನು ಹೇಳಿರುವಷ್ಟು ಹಣವನ್ನು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ.

ನಾನು 8ನೇ ತರಗತಿಯವರೆಗೆ ವ್ಯಾಸಂಗ ಮಾಡಿರುತ್ತೇನೆ. ನನ್ನ ಜನ್ಮ ದಿನಾಂಕ 12.07.1986 ಆಗಿರುತ್ತದೆ. ನಾನು ಚಾಲಕ ವೃತ್ತಿಯನ್ನು ಮಾಡುತ್ತಿದ್ದೆ. ನನ್ನ ಕೆಲಸ ಮತ್ತು ಆದಾಯದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಮೊದಲಿನಂತೆ ಈಗ ಕೆಲಸ ಮಾಡಲು ಯಾವುದೇ ತೊಂದರೆ ಇಲ್ಲ ಎಂದರೆ ಸರಿಯಲ್ಲ. ನನಗೆ ದೈಹಿಕವಾಗಿ ಮತ್ತು ಆರ್ಥಿಕವಾಗಿ ಯಾವುದೇ ತೊಂದರೆಗಳು ಆಗಿಲ್ಲ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**